# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 578
2. ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 11.07.2023
4. ಉತ್ತರಿಸುವ ಸಚಿವರು :ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರದ ಅಧೀನದಲ್ಲಿರುವ ಸಕ್ಕರೆ ಕಾರ್ಖಾನೆಗಳು ಎಷ್ಟು;ಮತ್ತು ಈ ಸಕ್ಕರೆ ಕಾರ್ಖಾನೆಗಳಲ್ಲಿ ರೈತರಿಗೆ ಒಂದು ಟನ್ ಕಬ್ಬಿಗೆ ಯಾವ ದರವನ್ನು ನೀಡಲಾಗುತ್ತಿದೆ; | ಪ್ರಸ್ತುತ ರಾಜ್ಯದಲ್ಲಿ ಮೈಸೂರು ಸಕ್ಕರೆ ಕಂಪನಿ ನಿ., ಮಂಡ್ಯ ಮತ್ತು ಎಂ.ಪಿ.ಎಂ. ಶುಗರ್ಸ್ ಲಿ., ಈ ಎರಡು ಕಾರ್ಖಾನೆಗಳು ಸರ್ಕಾರದ ಅಧೀನದಲ್ಲಿದ್ದು, ಈ ಪೈಕಿ ಎಂ.ಪಿ.ಎಂ. ಶುಗರ್ಸ್ ಕಾರ್ಖಾನೆಯು ಸ್ಥಗಿತಗೊಂಡಿರುತ್ತದೆ.<br><br>ಕೇಂದ್ರ ಸರ್ಕಾರವು ದಿನಾಂಕ 17.08.2022 ರಂದು 2022-23ನೇ ಸಾಲಿನ ಸಕ್ಕರೆ ಹಂಗಾಮಿಗೆ ಈ ಕೆಳಗಿನಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು(Fair and Remunerative Price)ನಿಗದಿಗೊಳಿಸಿರುತ್ತದೆ.<br><br>1. ಶೇಕಡ10.25ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆ.ಟನ್ ಗೆ ಕಬ್ಬಿಗೆ ರೂ.3050/-<br><br>2. ಶೇಕಡ 10.25ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ1ರಷ್ಟು ಇಳುವರಿಗೆ ಪ್ರತಿ ಮೆ.ಟನ್ ಗೆ ಕಬ್ಬಿಗೆ ರೂ.305/- ರಂತೆ ಹೆಚ್ಚುವರಿ ಬೆಲೆ.<br><br>3. ಶೇಕಡ 10.25ಕ್ಕಿಂತ ಕಡಿಮೆ ಹಾಗೂ ಶೇಕಡ9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ1ರಷ್ಟು ಇಳುವರಿಗೆ ಪ್ರತಿ ಮೆ.ಟನ್ ಗೆ ಕಬ್ಬಿಗೆ ರೂ.305/-ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು<br><br>4. ಶೇಕಡ 9.50 ಅಥವಾ 9.50ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆ.ಟನ್ ಗೆ ಕಬ್ಬಿಗೆ ಗೆ ರೂ.2821/- ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.<br><br>ಕೇಂದ್ರ ಸರ್ಕಾರದ ನಿರ್ದೇಶನದಂತೆ ಕಾರ್ಖಾನೆವಾರು ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (FRP) ನಿಗದಿಗೊಳಿಸಿ ಸಕ್ಕರೆ ನಿರ್ದೇಶನಾಲಯದಿಂದ ದಿನಾಂಕ: 18.10.2022 ರಂದು ಆದೇಶ ಹೊರಡಿಸಲಾಗಿದೆ.<br><br>ಮೈಸೂರು ಸಕ್ಕರೆ ಕಂಪನಿಯು 2022-23ನೇ ಸಾಲಿಗೆ ಪ್ರತಿ ಮೆ.ಟನ್ ಕಬ್ಬಿಗೆ ರೂ.2821/-ಗಳಷ್ಟು ಎಫ್.ಆರ್.ಪಿ.ದರವನ್ನು ಪಾವತಿಸುತ್ತದೆ. |

| | | |
|---|---|---|
| (ಆ) | ಸರ್ಕಾರದಿಂದ ರಾಜ್ಯದಲ್ಲಿ ಇನ್ನು ಹೆಚ್ಚು ಸಕ್ಕರೆ ಕಾರ್ಖಾನೆಗಳನ್ನು ನಿರ್ಮಾಣ ಮಾಡಿ ರೈತರು ಬೆಳೆದ ಕಬ್ಬುಗಳಿಗೆ ಉತ್ತಮ ಬೆಲೆಯನ್ನು ನೀಡಿ ರೈತರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಪ್ರಸ್ತುತ ಸರ್ಕಾರದಿಂದ ಹೊಸದಾಗಿ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸುವ ಯಾವುದೇ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ. ಮುಂದುವರೆದು ಈಗಾಗಲೇ ನಷ್ಟದಲ್ಲಿರುವ ಮೈಸೂರು ಸಕ್ಕರೆ ಕಾರ್ಖಾನೆಯ ಪುನಶ್ಚೇತನಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆ.<br><br>ರಾಜ್ಯದಲ್ಲಿ 2022-23ನೇ ಸಾಲಿನಲ್ಲಿ ಒಟ್ಟು 74 ಸಕ್ಕರೆ ಕಾರ್ಖಾನೆಗಳು ಕಾರ್ಯ ನಿರ್ವಹಿಸಿರುತ್ತವೆ. ಅಲ್ಲದೆ, 3 ಸಕ್ಕರೆ ಕಾರ್ಖಾನೆಗಳು ಪ್ರಾಯೋಗಿಕವಾಗಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸಿರುತ್ತವೆ. ಹೀಗೆ ಒಟ್ಟು 77 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಕಾರ್ಖಾನೆಗಳು ರೈತರು ಬೆಳೆದಂತಹ ಕಬ್ಬನ್ನು ಸಕಾಲದಲ್ಲಿ ಪೂರ್ಣವಾಗಿ ಅರೆದಿರುತ್ತವೆ. ಇವುಗಳಲ್ಲದೆ, ಪ್ರಸ್ತುತ ಹೊಸದಾಗಿ ಸಕ್ಕರೆ ಕಾರ್ಖಾನೆ ಸ್ಥಾಪನೆ ಮಾಡುವ ಸಂಬಂಧ ಅಂತರ ಪ್ರಮಾಣ ಪತ್ರ ನೀಡುವಂತೆ ಕೋರಿ ಒಟ್ಟು 61 ಅರ್ಜಿಗಳು ಉದ್ದಿಮೆದಾರರಿಂದ ಬಂದಿರುತ್ತವೆ. ಇದರಿಂದಾಗಿ ಹೆಚ್ಚು ಹೆಚ್ಚು ಹೊಸ ಸಕ್ಕರೆ ಕಾರ್ಖಾನೆಗಳು ಸ್ಥಾಪನೆಯಾಗುವ ಸಾಧ್ಯತೆ ಇರುತ್ತದೆ. ಸಕ್ಕರೆ ಕಾರ್ಖಾನೆಗೆ ಕಬ್ಬು ಕಚ್ಚಾ ವಸ್ತುವಾಗಿದ್ದು, ಕಬ್ಬಿನ ಲಭ್ಯತೆ ಆಧರಿಸಿ ಮತ್ತು ಹಾಲಿಯಿರುವ ಸಕ್ಕರೆ ಕಾರ್ಖಾನೆಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಸಕ್ಕರೆ ಕಾರ್ಖಾನೆಗಳ ಸ್ಥಾಪನೆಗೆ ಅನುಮತಿ ನೀಡಬೇಕಾಗಿರುತ್ತದೆ.<br>ಮುಂದುವರೆದು ರೈತರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರದ FRP ದರದೊಂದಿಗೆ ಸರ್ಕಾರದ ಆದೇಶ ಸಂಖ್ಯೆ: ಡಿಎಸ್‌ಕೆ/ಎಕೆ/01/2022-23 ದಿನಾಂಕ:05.12.2022ರನ್ವಯ, ರಾಜ್ಯದಲ್ಲಿ ಎಥನಾಲ್ ಉತ್ಪಾದಿಸುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.50/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ.<br>ಇದಲ್ಲದೆ, ಆದೇಶ ಸಂಖ್ಯೆ:ಡಿಎಸ್‌ಕೆ/ಎಸ್‌ಕೆ/04/2022-23, ದಿನಾಂಕ:29.12.2022ರನ್ವಯ, ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆಟ್ರಿಕ್ ಟನ್ ಒಂದಕ್ಕೆ ರೂ.100/-ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಲಾಗಿದೆ. |

ಸಂಖ್ಯೆ: ಸಿಐ 120 ಎಸ್‌ಜಿಎಫ್ 2023

(ಶಿವಾನಂದ ಎಸ್.ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು